# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ: ದಿ ಪಾಂಡವಪುರ ಸಹಕಾರ ಸಕ್ಕರೆ ಕಾರ್ಖಾನೆ ನಿಯಮಿತ ಇವರಿಗೆ ಮಂಡ್ಯ ಜಿಲ್ಲೆಯ ಪಾಂಡವಪುರ ತಾಲ್ಲೂಕು ಮತ್ತು ಗ್ರಾಮದಲ್ಲಿ 15 ಮೆ.ವ್ಯಾ. ಸಾಮರ್ಥ್ಯದ ಸಹ-ವಿದ್ಯುತ್ ಉತ್ಪಾದನೆ ಕೇಂದ್ರವನ್ನು ಸ್ಥಾಪಿಸಲು ನಿರಾಕ್ಷೇಪಣೆ ನೀಡುವ ಬಗ್ಗೆ.

ಓದಲಾಗಿದೆ: ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ರವರು ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಸಲ್ಲಿಸಿರುವ ಕಡತ ಸಂಖ್ಯೆ: T-98.

ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಬೆಂಗಳೂರು ನಂ. 1470 ದಿನಾಂಕ 13/6/16

* * *

**ಪ್ರಸ್ತಾವನೆ: –**

ಮೆ: ದಿ ಪಾಂಡವಪುರ ಸಹಕಾರ ಸಕ್ಕರೆ ಕಾರ್ಖಾನೆ ನಿಯಮಿತ ರವರು ಮಂಡ್ಯ ಜಿಲ್ಲೆಯ ಪಾಂಡವಪುರ ತಾಲ್ಲೂಕು ಮತ್ತು ಗ್ರಾಮದಲ್ಲಿ ಹಾಲಿ ಚಾಲ್ತಿಯಲ್ಲಿರುವ 3500 ಟಿಸಿಡಿ ಸಾಮರ್ಥ್ಯದ ಸಕ್ಕರೆ ಕಾರ್ಖಾನೆಯಲ್ಲಿ ಸಕ್ಕರೆ ಮಾತ್ರ ಉತ್ಪಾದನೆ ಮಾಡುತ್ತಿದ್ದು, ಸದರಿ ಕಾರ್ಖಾನೆಯ ಜೊತೆಯಲ್ಲಿ ಕಬ್ಬಿನ ಸಿಪ್ಪೆಯನ್ನು ಬಳಸಿ 15 ಮೆ.ವ್ಯಾ. ಸಾಮರ್ಥ್ಯದ ಸಹ-ವಿದ್ಯುತ್ ಉತ್ಪಾದನಾ ಘಟಕವನ್ನು ಸ್ಥಾಪಿಸಲು ಹಾಗೂ ಸದರಿ ಸಹ-ವಿದ್ಯುತ್ ಘಟಕದಿಂದ ಉತ್ಪಾದಿಸಲಾಗುವ ವಿದ್ಯುತ್ತಿನಲ್ಲಿ ಋತುವಿನ ಕಾಲದಲ್ಲಿ 10 ಮೆ.ವ್ಯಾ. ಹಾಗೂ ಋತುವಲ್ಲದ ಕಾಲದಲ್ಲಿ 13 ಮೆ.ವ್ಯಾ. ಸಾಮರ್ಥ್ಯದ ವರೆಗೂ ವಿದ್ಯುತ್‌ನ್ನು ವಿದ್ಯುತ್ ಜಾಲಕ್ಕೆ ಅಳವಡಿಸುವುದಾಗಿ ತಿಳಿಸಿ, ನಿಗದಿತ ಅರ್ಜಿಯೊಂದಿಗೆ ವಿಸ್ತೃತ ಯೋಜನಾ ವರದಿ ಮತ್ತು ಇತರೆ ದಾಖಲೆಗಳೊಂದಿಗೆ ಸಲ್ಲಿಸಿರುವ ಪ್ರಸ್ತಾವನೆಯನ್ನು ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಪರಿಶೀಲಿಸಿ, ಅಭಿವೃದ್ಧಿದಾರರು ಸ್ಥಾಪಿಸಲು ಉದ್ದೇಶಿಸಿರುವ 15 ಮೆ.ವ್ಯಾ. ಸಹ-ವಿದ್ಯುತ್ ಉತ್ಪಾದನೆ ಘಟಕಕ್ಕೆ ಸಂಬಂಧಿಸಿದಂತೆ ನಿಗಧಿತ ಅರ್ಜಿ ಶುಲ್ಕ ಮತ್ತು ಅಗತ್ಯ ದಾಖಲೆಗಳನ್ನು ಸಲ್ಲಿಸಿರುವುದರಿಂದ ಹಾಗೂ ಸದರಿ ಸಹ-ವಿದ್ಯುತ್ ಘಟಕಕ್ಕೆ ಅವಶ್ಯವಿರುವ ಯಂತ್ರೋಪಕರಣಗಳನ್ನು ಅಳವಡಿಸಿ, 2017ರ ಸೆಪ್ಟೆಂಬರ್ ತಿಂಗಳಲ್ಲಿ ವಿದ್ಯುತ್ ಉತ್ಪಾದನೆ ಮಾಡಿ ವಿದ್ಯುತ್ ಜಾಲಕ್ಕೆ ಜೋಡಿಸಲು ಗುರಿ ಹಮ್ಮಿಕೊಂಡಿರುವುದರಿಂದ ಅಭಿವೃದ್ಧಿದಾರರು ಕೋರಿರುವಂತೆ 15 ಮೆ.ವ್ಯಾ ಸಾಮರ್ಥ್ಯದ ಸಹ-ವಿದ್ಯುತ್ ಘಟಕವನ್ನು ಸ್ಥಾಪಿಸಲು ಹಾಗೂ ಸದರಿ ಸಹ-ವಿದ್ಯುತ್ ಘಟಕದಿಂದ ಉತ್ಪಾದಿಸಲಾಗುವ ವಿದ್ಯುತ್ತಿನಲ್ಲಿ ಋತುವಿನ ಕಾಲದಲ್ಲಿ 10 ಮೆ.ವ್ಯಾ. ಹಾಗೂ ಋತುವಲ್ಲದ ಕಾಲದಲ್ಲಿ 13 ಮೆ.ವ್ಯಾ. ವರೆಗೂ ವಿದ್ಯುತ್ ಜಾಲಕ್ಕೆ ಜೋಡಣೆ ಮಾಡಲು ಅನುಮೋದನೆ ನೀಡಬಹುದೆಂಬ ಅಭಿಪ್ರಾಯದೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಮೇಲೆ ಓದಲಾದ ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರದ ಆದೇಶ ಸಂಖ್ಯೆ: ಇಎನ್ 129 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ: 07.6.2016**

ಮೆ: ದಿ ಪಾಂಡವಪುರ ಸಹಕಾರ ಸಕ್ಕರೆ ಕಾರ್ಖಾನೆ ನಿಯಮಿತ ರವರು ಮಂಡ್ಯ ಜಿಲ್ಲೆಯ ಪಾಂಡವಪುರ ತಾಲ್ಲೂಕು ಮತ್ತು ಗ್ರಾಮದಲ್ಲಿ ಸ್ಥಾಪಿಸಿರುವ 3500 ಟಿಸಿಡಿ ಸಾಮರ್ಥ್ಯದ ಸಕ್ಕರೆ ಕಾರ್ಖಾನೆಯ ಜೊತೆಯಲ್ಲಿ 15 ಮೆ.ವ್ಯಾ. ಸಾಮರ್ಥ್ಯದ ಸಹ-ವಿದ್ಯುತ್ ಉತ್ಪಾದನಾ ಘಟಕವನ್ನು ಸ್ಥಾಪಿಸಲು ಹಾಗೂ ಸದರಿ ಸಹ-ವಿದ್ಯುತ್ ಘಟಕದಿಂದ ಉತ್ಪಾದಿಸಲಾಗುವ ವಿದ್ಯುತ್ತಿನಲ್ಲಿ ಋತುವಿನ ಕಾಲದಲ್ಲಿ 10 ಮೆ.ವ್ಯಾ. ಹಾಗೂ ಋತುವಲ್ಲದ ಕಾಲದಲ್ಲಿ 13 ಮೆ.ವ್ಯಾ. ಸಾಮರ್ಥ್ಯದ ವಿದ್ಯುತ್‌ನ್ನು ವಿದ್ಯುತ್ ಜಾಲಕ್ಕೆ ಅಳವಡಿಸಲು ಈ ಕೆಳಗಿನ ನಿಬಂಧನೆಗಳಿಗೊಳಪಟ್ಟು ಸರ್ಕಾರದ **'ನಿರಾಕ್ಷೇಪಣೆಯನ್ನು'** ನೀಡಲಾಗಿದೆ.

AGM (BC) 14/6/16

GM (Tech) I/C
KREDL

--2)

1. ಅಭಿವೃದ್ಧಿದಾರರು ಉತ್ಪಾದಿಸುವ ವಿದ್ಯುತ್‌ನ Evacuation ಗೆ ಸಂಬಂಧಿಸಿದಂತೆ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ಪ್ರತ್ಯೇಕ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು;
2. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಸಂಬಂಧಿಸಿದ ಇಲಾಖೆಗಳ/ಸಂಸ್ಥೆಗಳ ಅಂದರೆ, ಅರಣ್ಯ / ಕಂದಾಯ ಇಲಾಖೆ ಹಾಗೂ ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಅನುಮೋದನೆ ಪಡೆದುಕೊಳ್ಳತಕ್ಕದ್ದು;
3. ಅಭಿವೃದ್ಧಿದಾರರು ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಸ್ವಂತ ಬಳಕೆಗೆ ಉಪಯೋಗಿಸಿಕೊಂಡು ಹೆಚ್ಚುವರಿ ವಿದ್ಯುತ್ ಮಾರಾಟ ಮಾಡುವ ಕುರಿತು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ವಿದ್ಯುತ್ ಖರೀದಿ ಒಪ್ಪಂದ (ಪಿಪಿಎ) ಮಾಡಿಕೊಳ್ಳಲು ಅನುಮತಿಸಿದೆ;
4. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ನಿಯಮಾನುಸಾರ ಕೆ.ಆರ್.ಇ.ಡಿ.ಎಲ್.ಗೆ ಶುಲ್ಕ ಪಾವತಿಸತಕ್ಕದ್ದು;

ಈ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☎-22034674.

<u>ಇವರಿಗೆ:</u>

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

<u>ಪ್ರತಿ:</u>

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-1.
2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂ-9.
3 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
4 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂ-1.
5 ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ, ಮಂಡ್ಯ.
6 ಉಪ ಅರಣ್ಯ ಸಂರಕ್ಷಣಾಧಿಕಾರಿ ಮಂಡ್ಯ ಜಿಲ್ಲೆ, ಮಂಡ್ಯ.
7 ವ್ಯವಸ್ಥಾಪಕ ನಿರ್ದೇಶಕರು, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ಕಂಪನಿ, ಮೈಸೂರು.
8 ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪರಿಸರ ಭವನ, ಚರ್ಚ್‌ಸ್ಟ್ರೀಟ್ ರಸ್ತೆ, ಬೆಂಗಳೂರು-01.
9 M/s. The Pandavapura Sahakara Sakkare Karkhane Limited., Pandavapura R.S, Mandya District-571 435.
10 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
11 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
13 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.